(9)

## ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ರವರಿಂದ ನಿಯಮ 72 ರಡಿಯಲ್ಲಿ ನೀಡಲಾದ ಗಮನ ಸೆಳೆಯುವ ಸೂಚನೆಗೆ ಉತ್ತರ.**

### ಗಮನ ಸೆಳೆಯುವ ಸೂಚನೆ:-

"ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ಕೋವಿಡ್-19 ಕಾರಣದಿಂದ ಅನುದಾನರಹಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ, ಬೋಧಕೇತರರು, ವಾಹನ ಚಾಲಕರು ಹಾಗೂ ಇತರೆ ಸಿಬ್ಬಂದಿ ವರ್ಗದವರು ಜೀವನ ನಡೆಸಲು ಶಾಲೆಗಳು ನಡೆಯದೆ ಲಕ್ಷಾಂತರ ಶಿಕ್ಷಕರು ಮತ್ತು ಅವರ ಕುಟುಂಬ ವರ್ಗದವರು ತುಂಬಾ ಕಷ್ಟದಲ್ಲಿದ್ದಾರೆ. ಶಾಲಾ ಕಾಲೇಜುಗಳು ನಡೆಯುತ್ತಿಲ್ಲದಿರುವ ಕಾರಣದಿಂದ ಇವರಿಗೆ ಕನಿಷ್ಠ ವೇತನವು ಇಲ್ಲದೆ ಬೋಧಕ ಬೋಧಕೇತರರು ಇತರೆ ಸಿಬ್ಬಂದಿ ವರ್ಗದವರು ಬೀದಿ ಪಾಲಾಗಿದ್ದಾರೆ. ಸರ್ಕಾರವು ಈಗಾಗಲೇ ಹಲವು ವಲಯಗಳ ಕಾರ್ಮಿಕರನ್ನು ಅಸಂಘಟಿತ ಕಾರ್ಮಿಕರು ಎಂದು ಪರಿಗಣಿಸಿ ಸರ್ಕಾರದಿಂದ ಸೌಲಭ್ಯಗಳನ್ನು ನೀಡುತ್ತಿದೆ. ಇದೇ ರೀತಿ ಅನುದಾನರಹಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ, ಬೋಧಕೇತರರು, ವಾಹನ ಚಾಲಕರು ಹಾಗೂ ಇತರೆ ಸಿಬ್ಬಂದಿವರ್ಗದವರನ್ನು ಅಸಂಘಟಿತ ವಲಯದ ಕಾರ್ಮಿಕರು ಎಂದು ಘೋಷಣೆ ಮಾಡಿ ಇವರಿಗೆ ಕಾರ್ಮಿಕ ಇಲಾಖೆಯಿಂದ ನೀಡುವ ಎಲ್ಲಾ ಸೌಲಭ್ಯಗಳನ್ನು ನೀಡಬೇಕೆಂಬ ಬಗ್ಗೆ ಕಾರ್ಮಿಕ ಸಚಿವರ ಗಮನ ಸೆಳೆಯ ಬಯಸುತ್ತೇನೆ."

### ಗಮನ ಸೆಳೆಯುವ ಸೂಚನೆಗೆ ಉತ್ತರ :-

- "ಖಾಸಗಿ ಶಾಲಾ ಕಾಲೇಜು ಬೋಧಕೇತರ" ಅನುಸೂಚಿತ ಉದ್ದಿಮೆಯನ್ನು ಕನಿಷ್ಠ ವೇತನ ಕಾಯ್ದೆ, 1948 ಅನುಸೂಚಿಗೆ ಸೇರ್ಪಡೆಗೊಳಿಸಿದ್ದು, ಕನಿಷ್ಠ ವೇತನ ದರಗಳನ್ನು ನಿಗದಿಪಡಿಸಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.
- ರಾಜ್ಯ ಸರ್ಕಾರವು ಅಸಂಘಟಿತ ವಲಯದ ಇತರೆ ವರ್ಗ ಸೇರಿದಂತೆ ಈವರೆಗೆ ಒಟ್ಟು 43 ಸಂಘಟಿತ ಕಾರ್ಮಿಕರ ವರ್ಗಗಳನ್ನು ಗುರುತಿಸಿರುತ್ತದೆ. ಅವುಗಳಲ್ಲಿ ಚಾಲಕರಿಗೆ ಸಂಬಂಧಿಸಿದಂತೆ ಸಾರಿಗೆ ಇಲಾಖೆಯಿಂದ ನೀಡುವ ಊರ್ಜಿತ ಖಾಸಗಿ ವಾಣಿಜ್ಯ ಸಾರಿಗೆ ಚಾಲನ ಪರವಾನಗಿಯನ್ನು ಹೊಂದಿರುವ ಖಾಸಗಿ ವಾಣಿಜ್ಯ ಸಾರಿಗೆಗಳಾದ ಆಟೋ, ಟ್ಯಾಕ್ಸಿ, ಮ್ಯಾಕ್ಸಿ ಕ್ಯಾಬ್, ಲಾರಿ, ಬಸ್ ಮತ್ತು ಇತರೆ ಸಾರಿಗೆ ವಾಹನಗಳ ಚಾಲಕರನ್ನು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ "ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ" ಎಂಬ ಅಪಘಾತ ಪರಿಹಾರ ಯೋಜನೆಯ ವ್ಯಾಪ್ತಿಗೆ ತರಲಾಗಿದ್ದು. ಯೋಜನೆಯಡಿ, ಅಪಘಾತದಿಂದಾದ ಮರಣ ಹೊಂದಿದ ಪ್ರಕರಣಗಳಲ್ಲಿ ರೂ. 5 ಲಕ್ಷ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಪ್ರಕರಣಗಳಲ್ಲಿ ರೂ.2 ಲಕ್ಷದವರೆಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೂ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ ಮತ್ತು ಅಪಘಾತದ ಕಾರಣ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.

- ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಲಯವು ಅಸಂಘಟಿತ ಕಾರ್ಮಿಕರ ದತ್ತಾಂಶವನ್ನು ಸಂಗ್ರಹಿಸುವ ಉದ್ದೇಶದಿಂದ, ಅಸಂಘಟಿತ ಕಾರ್ಮಿಕರ ಸಮಗ್ರ ರಾಷ್ಟ್ರೀಯ ದತ್ತಾಂಶ ಸಂಗ್ರಹಿಸಲು ತಂತ್ರಾಂಶ (NDUW-National Database for Unorganised Worker) ವನ್ನು ಅಭಿವೃದ್ಧಿ ಪಡಿಸಿ, ದಿನಾಂಕ:26-08-2021ರಂದು ಚಾಲನೆ ನೀಡಿರುತ್ತದೆ. ಬೋಧಕರು ಮತ್ತು ಸಹಾಯಕ ಶಿಕ್ಷಕರು (ಮನೆಗಳಲ್ಲಿ ಬೋಧಕರು, ಕೋಚಿಂಗ್ ಸೆಂಟರ್‌ಗಳಲ್ಲಿ ಹಾಗೂ ಇತರೆ), ಚಾಲಕರು, ಸ್ವಚ್ಛತಾ ಮತ್ತು ಸಹಾಯಕ ಸಿಬ್ಬಂದಿಗಳು ಸೇರಿದಂತೆ ಸುಮಾರು 156 ವರ್ಗಗಳ ಅಸಂಘಟಿತ ಕಾರ್ಮಿಕರನ್ನು ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ.

- ಈ ಯೋಜನೆಯಡಿ, 18-59 ವಯೋಮಾನದ ಇ.ಎಸ್.ಐ ಹಾಗೂ ಭವಿಷ್ಯನಿಧಿ ಸೌಲಭ್ಯವನ್ನು ಹೊಂದಿರದ ಹಾಗೂ ಆದಾಯ ತೆರಿಗೆ ಪಾವತಿ ಮಾಡದ ಅಸಂಘಟಿತ ಕಾರ್ಮಿಕರು ಸಾಮಾನ್ಯ ಸೇವಾ ಕೇಂದ್ರಗಳ ನೋಂದಣಿ ಮಾಡುವ ಕಾರ್ಮಿಕರಿಗೆ ಇ-ಶ್ರಮ್ ಪೋರ್ಟಲ್ ಮೂಲಕ (eshram.gov.in) ಉಚಿತವಾಗಿ ನೋಂದಾಯಿಸಬಹುದಾಗಿದ್ದು, ಗುರುತಿನ ಚೀಟಿಯನ್ನು ನೋಂದಾಯಿತ ಸ್ಥಳದಲ್ಲೇ ವಿತರಿಸಲಾಗುತ್ತದೆ. ಈ ರೀತಿ ನೊಂದಾಯಿಸಲ್ಪಟ್ಟ ಕಾರ್ಮಿಕರು ಒಂದು ವರ್ಷ ಅವಧಿಗೆ ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ (PM-SBY) ಪ್ರಯೋಜನ ಪಡೆಯಬಹುದು. ಇದು ಆರೋಗ್ಯ ವಿಮೆಯಾಗಿದ್ದು, ವಿಮಾ ಅವಧಿಯಲ್ಲಿ ಅಪಘಾತದಿಂದ ಮರಣ ಹೊಂದಿದಲ್ಲಿ ಅಥವಾ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2 ಲಕ್ಷ ಹಾಗೂ ಭಾಗಶಃ ಅಂಗವೈಕಲ್ಯಕ್ಕೆ ರೂ.1 ಲಕ್ಷ ಪರಿಹಾರ ದೊರೆಯಲಿದೆ ಮತ್ತು ಈ ದತ್ತಾಂಶವನ್ನು ಬಳಸಿಕೊಂಡು ಅಸಂಘಟಿತ ಕಾರ್ಮಿಕರಿಗೆ ವಿಶೇಷ ನೀತಿಗಳು ಹಾಗೂ ಯೋಜನೆಗಳನ್ನು ರೂಪಿಸುವುದು ಕೇಂದ್ರ ಸರ್ಕಾರದ ಉದ್ದೇಶವಾಗಿದ್ದು ಕೇಂದ್ರ ಸರ್ಕಾರವು ತೆಗೆದುಕೊಳ್ಳಬಹುದಾದ ಕ್ರಮಗಳನ್ನು ನಿರೀಕ್ಷಿಸಲಾಗಿದೆ.

ಸಂಖ್ಯೆ: ಕಾಇ 366 ಎಲ್‌ಇಟಿ 2021

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು